# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 718 |
| ಸದಸ್ಯರ ಹೆಸರು | : | ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 16.12.2024 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರದ ಮಹತ್ವಕಾಂಕ್ಷಿ ಯೋಜನೆಯಾದ ಮಕ್ಕಳ ಬಿಸಿಯೂಟ ಯೋಜನೆಯು ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ಹಿತದೃಷ್ಟಿಯಿಂದ ಜಾರಿಗೊಳಿಸಿದ್ದು, ಗುಬ್ಬಿ ತಾಲ್ಲೂಕು, ಟಿ. ಪಾಳ್ಯದ (ನಡುವಲಪಾಳ್ಯ) ಸರ್ಕಾರಿ ಪ್ರಾಥಮಿಕ ಪಾಠಶಾಲೆಯ ಮಕ್ಕಳಿಗೆ 15 ದಿನಗಳವರೆಗೆ ಮೊಟ್ಟೆ. ಬಾಳೆಹಣ್ಣು, ಚಿಕ್ಕಿ ಹಾಗೂ ಮಧ್ಯಾಹ್ನ ಬಿಸಿಯೂಟ ನೀಡದೇ ನಿರ್ಲಕ್ಷ್ಯವಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಮಧ್ಯಾಹ್ನ ಉಪಹಾರ ಯೋಜನೆಯಡಿ ರಾಜ್ಯ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪೂರಕ ಪೌಷ್ಠಿಕ ಆಹಾರ ರೂಪದಲ್ಲಿ ಮೊಟ್ಟೆ/ ಬಾಳೆಹಣ್ಣು/ ಶೇಂಗಾ ಚಿಕ್ಕಿಯನ್ನು ವಾರದಲ್ಲಿ 06 ದಿನ ವಿತರಿಸಲಾಗುತ್ತಿದೆ.<br>ತುಮಕೂರು ಜಿಲ್ಲೆಯ ಗುಬ್ಬಿ ತಾಲ್ಲೂಕಿನ ಟಿ. ಪಾಳ್ಯ ಗ್ರಾಮದಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಅಡುಗೆ ಸಿಬ್ಬಂದಿಗಳು ಕರ್ತವ್ಯಕ್ಕೆ ಗೈರು ಹಾಜರಾಗಿದ್ದ ಕಾರಣ 04 ದಿನಗಳವರೆಗೆ ಮಾತ್ರ ಸದರಿ ಶಾಲೆಯಲ್ಲಿ ಮೊಟ್ಟೆ/ಬಾಳೆಹಣ್ಣು/ಚಿಕ್ಕಿ ಹಾಗೂ ಮಧ್ಯಾಹ್ನ ಬಿಸಿಯೂಟ ನೀಡಿರುವುದಿಲ್ಲ. |
| ಆ) | ಬಂದಿದಲ್ಲಿ, ಈ ರೀತಿ ನಿರ್ಲಕ್ಷ್ಯವಹಿಸಿರುವ ಅಧಿಕಾರಿಗಳ ಮೇಲೆ ಸರ್ಕಾರ ಏನು ಕ್ರಮ ಕೈಗೊಂಡಿದೆ; | ಈ ಬಗ್ಗೆ ಸದರಿ ಶಾಲಾ ಮುಖ್ಯ ಶಿಕ್ಷಕರಿಗೆ ಗುಬ್ಬಿ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕಾಧಿಕಾರಿಗಳಿಂದ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗಿದೆ. ಬಿಸಿಯೂಟ ಸ್ಥಗಿತಕ್ಕೆ ಕಾರಣವಾದ ಅಂಶಗಳನ್ನು ಸ್ಥಳಕ್ಕೆ ಭೇಟಿ ನೀಡಿ ಕೂಲಂಕಷವಾಗಿ ಪರಿಶೀಲಿಸಿ ಸೂಕ್ತ ಪರಿಹಾರ ಮತ್ತು ಪರ್ಯಾಯ ವ್ಯವಸ್ಥೆಗಾಗಿ ಅಗತ್ಯ ಮಾರ್ಗದರ್ಶನವನ್ನು ಜಿಲ್ಲಾ ಪಂಚಾಯತ್ ಮಧ್ಯಾಹ್ನ ಉಪಹಾರ ಯೋಜನೆಯ ಶಿಕ್ಷಣಾಧಿಕಾರಿಗಳು ಮತ್ತು ತಾಲ್ಲೂಕು ಸಹಾಯಕ ನಿರ್ದೇಶಕರು ನೀಡಿದ್ದು, ಶಾಲೆಯಲ್ಲಿ ಅಡುಗೆ ಸಿಬ್ಬಂದಿಗಳ ಗೈರು ಹಾಜರಾತಿಯಿಂದ ತಲೆದೋರಿದ ಸಮಸ್ಯೆಯನ್ನು ಬಗೆಹರಿಸಲಾಗಿದೆ. ಪ್ರಸ್ತುತ ಸದರಿ ಶಾಲಾ ಮಕ್ಕಳಿಗೆ ಯಾವುದೇ ಅಡಚಣೆ ಇಲ್ಲದೇ ಬಿಸಿಯೂಟ ವಿತರಣೆ ನಡೆಯುತ್ತಿದೆ. |
| ಇ) | ಎಲ್ಲಾ ಕಡೆಗಳಲ್ಲಿ ಈ ರೀತಿಯ ಪ್ರಕರಣಗಳು ಮರುಕಳಿಸದಂತೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? | ಈ ರೀತಿಯ ಪ್ರಕರಣಗಳು ರಾಜ್ಯದಲ್ಲಿ ಇತರೆ ಜಿಲ್ಲೆಗಳಲ್ಲಿ ನಡೆದಿರುವ ಬಗ್ಗೆ ದೂರುಗಳು ಬಂದಿರುವುದಿಲ್ಲ. ಅಡುಗೆ ಸಿಬ್ಬಂದಿಯವರ ಅನಧಿಕೃತ ಗೈರು ಹಾಜರಾತಿಯನ್ನು ಗಂಭೀರವಾಗಿ ಪರಿಗಣಿಸಿ, ಕ್ರಮ ಕೈಗೊಂಡು ಇಂತಹ ಪ್ರಕರಣಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಲಾಗಿದೆ. |

ಇಪಿ 111 ಎಂಎಂಎಸ್ 2024

**(ಎಸ್.ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.**